**ದಿನಾಂಕಃ 18.06.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಂ ಡಿ ವಕೀಲರಿಂದಃ**

ನಾನು ಈ ವ್ಯಾಜ್ಯದಲ್ಲಿ 1 ನೇ ವಾದಿಯಾಗಿದ್ದು, ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು, ನನ್ನ ವಕೀಲರಿಗೆ ನಾನೇ ನನ್ನ ಪರವಾಗಿ ಸಲ್ಲಿಸಿದ ಮುಖ್ಯ ವಿಚಾರಣಾ ಪ್ರಮಾಣ ಪತ್ರದ ಅಂಶಗಳನ್ನು ಹೇಳಿ ಬರೆಸಿದ್ದು, ನಾನೇ ಹೇಳಿ ಬೆರಳಚ್ಚು ಮಾಡಿಸಿ ಓದಿ, ತಿಳಿದುಕೊಂಡು ಸಹಿಯನ್ನು ಹಾಕಿರುತ್ತೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ನಾನು ಈ ಕೆಳಕಂಡ ದಾಖಲಾತಿಗಳನ್ನು, ಈ ದಾವೆಯಲ್ಲಿ ನನ್ನ ಪರವಾಗಿ ಹಾಜರುಪಡಿಸಿ, ನಿಶಾನೆಗೆ ನನ್ನ ಪರವಾಗಿ ಒಳಪಡಿಸಿಕೊಂಡಿರುತ್ತೇನೆ.

1. ದಾವಾ ಆಸ್ತಿಗೆ ಸಂಬಂಧಿಸಿದಂತೆ 2022–23 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–1 ಎಂದು ಗುರುತಿಸಲಾಯಿತು.

2. ದಾವಾ ಆಸ್ತಿಗೆ ಸಂಬಂಧಿಸಿದಂತೆ 1974–75 ರಿಂದ 1978–79 ರವರೆಗಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–2 ಎಂದು ಗುರುತಿಸಲಾಯಿತು.

3. ದಾವಾ ಆಸ್ತಿಗೆ ಸಂಬಂಧಿಸಿದಂತೆ 1989–90 ರಿಂದ 1993–94 ರವರೆಗಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–3 ಎಂದು ಗುರುತಿಸಲಾಯಿತು.

4. ದಾವಾ ಆಸ್ತಿ ನಂ.2 ಮತ್ತು 3 ಸ್ವತ್ತುಗಳಿಗೆ ಸಂಬಂಧಪಟ್ಟಂತೆ 2022–23 ನೇ ಸಾಲಿನ

ಎರಡು ಡಿಮ್ಯಾಂಡ್ ರಜಿಸ್ಟರ್ ನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ–4 ಮತ್ತು 5 ಎಂದು ಗುರುತಿಸಲಾಯಿತು.

5. ಫಾರಂ ನಂ.7 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–6 ಎಂದು ಗುರುತಿಸಲಾಯಿತು.

6. ಭೂ ನ್ಯಾಯ ಮಂಡಳಿಯ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–7 ಎಂದು ಗುರುತಿಸಲಾಯಿತು.

7. ಫಾರಂ ನಂ.10 ರ ದೃಡೀಕೃತ ನಕಲನ್ನು ಅದನ್ನು ನಿಪಿ–8 ಎಂದು ಗುರುತಿಸಲಾಯಿತು.

8. ವಾದಿಯ ತಂದೆಯ ಶಾಲಾ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–9 ಎಂದು ಗುರುತಿಸಲಾಯಿತು.

9. 1 ನೇ ವಾದಿಯ ಶಾಲಾ ದೃಡೀಕರಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–10 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಪ್ರತಿವಾದಿ ಮತ್ತು ಪ್ರತಿವಾದಿ ಪರ ವಕೀಲರನ್ನು ಕೂಗಲಾಗಿ, ಗೈರು ಹಾಜರಿದ್ದು, ಪಾಟಿ ಸವಾಲಿಗೆ ಸಮಯಾವಕಾಶ ನೀಡಿ ಮುಂದೂಡಲಾಯಿತು.

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಸಿ/ಸಿ ಹೆಚ್ಚುವರಿ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**